# All India Radio: Bangalore
# Regional Bulletin In Kannada
# 14.09.2025 / 6.40 p.m.
## ಆಕಾಶವಾಣಿ ಬೆಂಗಳೂರು
## ಪ್ರದೇಶ ಸಮಾಚಾರ

ಮುಖ್ಯಾಂಶಗಳು

- ಕೃಷಿ - ಸ್ವಾವಲಂಬಿ ಭಾರತದ ಆಧಾರಸ್ತಂಭ ; ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್
- ಪ್ರವಾಹ ಪೀಡಿತ ಹಿಮಾಚಲಪ್ರದೇಶದಲ್ಲಿ ಪರಿಹಾರ, ಪುನರ್ವಸತಿ ಕಾರ್ಯಕ್ಕಾಗಿ ೫ ಕೋಟಿ ರೂಪಾಯಿ ನೀಡಲು ರಾಜ್ಯ ಸರ್ಕಾರ ನಿರ್ಧಾರ
- ಈರುಳ್ಳಿ ಬೆಲೆಕುಸಿತ ಹಿನ್ನಲೆ, ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಭೇಟಿ ಮಾಡಿದ ರೈತರ ನಿಯೋಗ ; ಪಿಡಿಪಿಎಸ್ ಯೋಜನೆ ಜಾರಿಗೆ ಮನವಿ
- ನಾಳೆ ಪ್ರಜಾಪ್ರಭುತ್ವ ದಿನಾಚರಣೆ ; ವಿಧಾನಸೌಧದಲ್ಲಿ ಕಾರ್ಯಕ್ರಮ ಉದ್ಘಾಟಿಸಲಿರುವ ಮುಖ್ಯಮಂತ್ರಿ ಸಿದ್ದರಾಮಯ್ಯ

*><><*><><*

ಭಾರತೀಯ ಕೃಷಿ ಮತ್ತು ಸಂಬಂಧಿತ ವಲಯಗಳಲ್ಲಿ ಅಭಿವೃದ್ಧಿಗಾಗಿ, ರೈತರ ಆದಾಯವನ್ನು ಹೆಚ್ಚಿಸಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಹಲವು ಯೋಜನೆಗಳನ್ನು ರೂಪಿಸಿದ್ದು, ಇವುಗಳ ಸದುಪಯೋಗ ಪಡೆದುಕೊಳ್ಳಬೇಕು ಎಂದು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಕರೆ ನೀಡಿದ್ದಾರೆ. ಧಾರವಾಡದ ಕೃಷಿ ವಿಜ್ಞಾನ ವಿಶ್ವ ವಿದ್ಯಾಲಯದ ವತಿಯಿಂದ ಆಯೋಜಿಸಲಾಗಿರುವ ಕೃಷಿ ಮೇಳ -೨೦೨೫ ಅನ್ನು ಉದ್ಘಾಟಿಸಿ ಅವರು ಮಾತನಾಡಿದರು. ಕೃಷಿ ಕ್ಷೇತ್ರದಲ್ಲಿ ಯುವಕರು ಮತ್ತು ಮಹಿಳೆಯರು ಉದ್ಯಮಶೀಲತೆ ಮತ್ತು ನಾವೀನ್ಯತೆಯೊಂದಿಗೆ ಮುಂಬರುವ ಅವಶ್ಯಕತೆಯಿದೆ. ಕೃಷಿ ನವೋದ್ಯಮಗಳು, ಸಂಸ್ಕರಣಾ ಘಟಕಗಳು, ಕೃಷಿ ಪ್ರವಾಸೋದ್ಯಮದಂತಹ ಕ್ಷೇತ್ರಗಳು ಯುವಕರನ್ನು ಆಕರ್ಷಿಸುತ್ತಿವೆ ಎಂದರು. ಕೃಷಿ ಸ್ವಾವಲಂಬಿ ಭಾರತದ ಆಧಾರ ಸ್ತಂಭ, ರೈತರು ಸ್ವಾವಲಂಬಿಗಳಾದಾಗ ರಾಷ್ಟ್ರ ಸ್ವಾವಲಂಬಿಯಾಗುತ್ತದೆ. ಈ ನಿಟ್ಟಿನಲ್ಲಿ ಗುಣಮಟ್ಟದ ಬೀಜಗಳು ಉತ್ತಮ ತಂತ್ರಜ್ಞಾನ, ನ್ಯಾಯಯುತ ಬೆಲೆ ಮತ್ತು ಮಾರುಕಟ್ಟೆಗೆ ನೇರ ಪ್ರವೇಶ ಮುಖ್ಯವಾಗುತ್ತವೆ ಎಂದರು.

ಧ್ವನಿ : ಥಾವರ್ ಚಂದ್ ಗೆಹ್ಲೋಟ್

ನಾಳೆ ಮುಖ್ಯಮಂತ್ರಿ ಸಿದ್ದರಾಮಯ್ಯ ಧಾರವಾಡಕ್ಕೆ ಭೇಟಿ ನೀಡುತ್ತಿದ್ದು, ಕೃಷಿ ಮೇಳದಲ್ಲಿ ಪಾಲ್ಗೊಂಡು ಸಾಧಕರಿಗೆ ಪ್ರಶಸ್ತಿ ಪ್ರದಾನ ಮಾಡಲಿದ್ದಾರೆ.

*><><*><><*

ಪ್ರವಾಹ ಪೀಡಿತ ಹಿಮಾಚಲ ಪ್ರದೇಶದ ಪರಿಹಾರ ಮತ್ತು ಪುನರ್‌ವಸತಿ ಕಾರ್ಯಗಳಿಗೆ ಸಹಾಯದ ರೂಪದಲ್ಲಿ ಕರ್ನಾಟಕ ಸರ್ಕಾರ ೫ ಕೋಟಿ ರೂಪಾಯಿ ನೀಡಲಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ. ಸಾಮಾಜಿಕ ಮಾಧ್ಯಮದಲ್ಲಿಂದು ಹಿಮಾಚಲಪ್ರದೇಶ ಮುಖ್ಯಮಂತ್ರಿ ಸುಖ್ವಿಂದರ್ ಸಿಂಗ್ ಸುಖು ಅವರಿಗೆ ಬರೆದಿರುವ ಪತ್ರದೊಂದಿಗೆ ಸಂದೇಶ ಹಂಚಿಕೊಂಡಿರುವ ಅವರು, ಹಿಮಾಚಲ ಪ್ರದೇಶದಲ್ಲಿ ಸಂಭವಿಸಿದ ಭೀಕರ ಪ್ರವಾಹ ಅಪಾರ ಪ್ರಮಾಣ ಸಾವು-ನೋವು, ಮನೆ ಮತ್ತು ಜೀವನೋಪಾಯಕ್ಕೆ ಹಾನಿ ಮಾಡಿದೆ. ಕರ್ನಾಟಕದ ಜನರು ಈ ನೋವನ್ನು ಹಂಚಿಕೊಂಡು ಹಿಮಾಚಲದ ಜನರೊಂದಿಗೆ ಒಗ್ಗಟ್ಟಿನಿಂದ ನಿಲ್ಲುತ್ತಾರೆ ಎಂದಿದ್ದಾರೆ.

*><><*><><*

ಚೆನ್ನೈ ಕೈಗಾರಿಕಾ ಕಾರಿಡಾರ್-ಬಿಸಿಐಸಿ ಯೋಜನೆಯನ್ನು ಮಂಗಳೂರು ವರೆಗೆ ವಿಸ್ತರಿಸುವ ಮೂಲಕ ಆರ್ಥಿಕ ಹಾಗೂ ಔದ್ಯೋಗಿಕವಾಗಿ ಸಮಗ್ರ ಅಭಿವೃದ್ಧಿಗೆ ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಸಹಕರಿಸಬೇಕೆಂದು ಮಾಜಿ ಪ್ರಧಾನಿ ಹೆಚ್.ಡಿ. ದೇವೇಗೌಡ ಆಗ್ರಹಿಸಿದ್ದಾರೆ. ಹಾಸನದಲ್ಲಿ ಇಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಆಂಧ್ರ ಪ್ರದೇಶದ ಕೃಷ್ಣಪಟ್ಟಣಂ ಮತ್ತು ತಮಿಳುನಾಡಿನ ಪೊನ್ನೇರಿ ಸೇರಿ ಕೆಲವು ಕೈಗಾರಿಕಾ ಯೋಜನೆ ಒಳಗೊಂಡಿದೆ. ಚೆನ್ನೈ-ಬೆಂಗಳೂರು ಮಾರ್ಗದಲ್ಲಿ ಈಗಾಗಲೇ ಕಾಮಗಾರಿಯು ಆರಂಭವಾಗಿದೆ. ಅದನ್ನು ಮಂಗಳೂರುವರೆಗೆ ವಿಸ್ತರಿಸಿದರೆ ಹಾಸನ ಸೇರಿ ಇತರ ಜಿಲ್ಲೆಗಳು ಅಭಿವೃದ್ಧಿ ಹೊಂದುತ್ತವೆ. ಈ ವಿಚಾರದಲ್ಲಿ ರಾಜಕೀಯ ಮಾಡದೆ ರಾಜ್ಯ ಸರ್ಕಾರ ಮನಸ್ಸು ಮಾಡಬೇಕು. ಕೇಂದ್ರ ಮಟ್ಟದಲ್ಲಿ ತಾವು ಸಹ ಸಾಧ್ಯವಾದ ಪ್ರಯತ್ನ ಮಾಡುತ್ತೇನೆಂದು ಭರವಸೆ ನೀಡಿದ್ದಾರೆ.

*><><*><><*

ರಾಜ್ಯದಲ್ಲಿ ಈರುಳ್ಳಿ ಬೆಲೆ ಕುಸಿತದಿಂದ ಈರುಳ್ಳಿ ಬೆಳೆಗಾರರು ಸಂಕಷ್ಟವನ್ನು ಅನುಭವಿಸುತ್ತಿರುವ ಹಿನ್ನೆಲೆಯಲ್ಲಿ  ಜಿಲ್ಲೆಯ ಹೂವಿನ ಹಡಗಲಿ ತಾಲೂಕಿನ ಉತ್ತಂಗಿ ಗ್ರಾಮದ ರಾಜ್ಯ ಈರುಳ್ಳಿ ಬೆಳೆಗಾರರ ಸಂಘ, ರಾಜ್ಯದ ವಿವಿಧ ಜಿಲ್ಲೆಗಳ ರೈತರ ನಿಯೋಗದೊಂದಿಗೆ ಹುಬ್ಬಳ್ಳಿಗೆ ತೆರಳಿ, ಕೇಂದ್ರ ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಪ್ರಲ್ಹಾದ್ ಜೋಶಿಯವರನ್ನು ಭೇಟಿ ಮಾಡಿತು. ಈ ವೇಳೆ ಸಂಘದ ರಾಜ್ಯಾಧ್ಯಕ್ಷ ಸಿದ್ದೇಶ್. ಎನ್.ಎಂ ಈರುಳ್ಳಿ ಬೆಳೆಗಾರರ ಪರಿಸ್ಥಿತಿಯನ್ನು ತಿಳಿಸಿ ಕೇಂದ್ರದ ಯೋಜನೆಯದ ಪಿಡಿಪಿಎಸ್ ಅನ್ನು ಜಾರಿಗೆ ತರುವಂತೆ ಸಚಿವರಿಗೆ ಮನವಿ ಮಾಡಿದರು. ಈ ಕುರಿತು ರಾಜ್ಯ ಈರುಳ್ಳಿ ಬೆಳೆಗಾರರ ಸಂಘದ ಅಧ್ಯಕ್ಷ ಸಿದ್ದೇಶ್ ಎನ್.ಎಂ ಆಕಾಶವಾಣಿಗೆ ಮಾಹಿತಿ ನೀಡಿದ್ದಾರೆ.

ಧ್ವನಿ : ಸಿದ್ದೇಶ್ ಎನ್.ಎಂ

*><><*><><*

ನನ್ನ ಮತ ನನ್ನ ಹಕ್ಕು ಎಂಬ ಧ್ಯೇಯವಾಕ್ಯದೊಂದಿಗೆ ರಾಜ್ಯಾದ್ಯಂತ ನಾಳೆ ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನವನ್ನು ಆಚರಿಸಲಾಗುವುದು. ವಿಧಾನಸೌಧದ ಬ್ಯಾಂಕ್ವೆಟ್ ಸಭಾಂಗಣದಲ್ಲಿ ನಡೆಯಲಿರುವ ರಾಜ್ಯಮಟ್ಟದ ಪ್ರಧಾನ ಕಾರ್ಯಕ್ರಮವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಉದ್ಘಾಟಿಸಲಿದ್ದಾರೆ. ಕಾರ್ಯಕ್ರಮದ ಭಾಗವಾಗಿ ಚಿತ್ರಕಲಾ ಸ್ಪರ್ಧೆ, ಛಾಯಾಚಿತ್ರ ಮತ್ತು ಚರ್ಚಾ ಸ್ಪರ್ಧೆಗಳಿಗೂ ಚಾಲನೆ ನೀಡಲಾಗುವುದು. ಇದೇ ವೇಳೆ ಪತ್ರಿಕೋದ್ಯಮದಲ್ಲಿ ಸ್ನಾತಕೋತ್ತರ ಪದವಿ ಪಡೆದ ಪರಿಶಿಷ್ಟ ಜಾತಿ ನಿರುದ್ಯೋಗಿ ಯುವಕರಿಗೆ ವಿದ್ಯುನ್ಮಾನ ಮತ್ತು ಡಿಜಿಟಲ್ ಉದ್ಯಮಗಳನ್ನು ಸ್ಥಾಪಿಸಲು ಸಹಾಯ ಧನ ವಿತರಿಸುವ ಕಾರ್ಯಕ್ರಮವಿದೆ. ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಸಭಾಪತಿ ಬಸವರಾಜ ಹೊರಟ್ಟಿ, ಸಭಾಧ್ಯಕ್ಷ ಯು.ಟಿ. ಖಾದರ್ ಮತ್ತಿತರ ಸಚಿವರು, ಶಾಸಕರು ಹಾಗೂ ಗಣ್ಯರು ಭಾಗವಹಿಸುವ ನಿರೀಕ್ಷೆಯಿದೆ. ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ ನಾಳೆ ರಾಜ್ಯದ ವಿವಿಧ ಜಿಲ್ಲೆಗಳಲ್ಲೂ ವಿಶೇಷ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗಿದೆ. ಹಲವು ಜಿಲ್ಲೆಗಳಲ್ಲಿ ಇಂದು ಆಯಾ ಜಿಲ್ಲೆಗಳಿಂದ ಬೆಂಗಳೂರಿಗೆ ಸಂಚರಿಸುವ ಬೈಕ್ ರ್ಯಾಲಿಗಳನ್ನು ಹಮ್ಮಿಕೊಳ್ಳಲಾಗಿದ್ದು, ಈ ಸವಾರರು ನಾಳೆ ವಿಧಾನಸೌಧದಲ್ಲಿ ಜರುಗಲಿರುವ ಸಮಾರಂಭದಲ್ಲಿ ಪಾಲ್ಗೊಳ್ಳಲಿದ್ದಾರೆ. ಸಮಾಜ ಕಲ್ಯಾಣ ಇಲಾಖೆ, ಶಾಲಾ ಶಿಕ್ಷಣ ಇಲಾಖೆ ಮತ್ತು ಸಾಕ್ಷರತಾ ಇಲಾಖೆ, ಸೇರಿದಂತೆ ವಿವಿಧ ಇಲಾಖೆಗಳ ಸಹಯೋಗದಲ್ಲಿ ನಾಳೆ ಬೆಂಗಳೂರು ಗ್ರಾಮಾಂತರ ಜಿಲ್ಲಾ ಮಟ್ಟದ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. ಬೆಳಿಗ್ಗೆ ಜಿಲ್ಲೆಯ ದೇವನಹಳ್ಳಿ ತಾಲ್ಲೂಕು ತಹಶೀಲ್ದಾರ್ ಕಚೇರಿಯಿಂದ ಬೈಕ್ ಹಾಗೂ ಸೈಕಲ್ ರ್ಯಾಲಿಯನ್ನು ಹಮ್ಮಿಕೊಳ್ಳಲಾಗಿದೆ. ರ್ಯಾಲಿಗೆ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ಚಾಲನೆ ನೀಡಲಿದ್ದಾರೆ. ಹಾಸನ ಜಿಲ್ಲೆಯಲ್ಲಿ ಪ್ರಜಾಪ್ರಭುತ್ವ ದಿನದ ಅಂಗವಾಗಿ ಇಂದು ಬೆಳಿಗ್ಗೆ ಬೆಂಗಳೂರಿಗೆ ಪ್ರಯಾಣ ಆರಂಭಿಸಿದ ಬೈಕ್ ರ್ಯಾಲಿಗೆ ಜಿಲ್ಲಾಧಿಕಾರಿ ಕೆ.ಎಸ್ ಲತಾಕುಮಾರಿ ಹಸಿರು ನಿಶಾನೆ ತೋರಿದರು. ಕಾರ್ಯಕ್ರಮದಲ್ಲಿ ಮೊದಲಿಗೆ ಮೌನ ಆಚರಿಸುವ ಮೂಲಕ ಮೊಸಳೆ ಹೊಸಹಳ್ಳಿಯಲ್ಲಿ ಗಣೇಶ ಮೆರವಣಿಗೆಯ ದುರಂತದಲ್ಲಿ ಮೃತಪಟ್ಟವರಿಗೆ ಶ್ರದ್ಧಾಂಜಲಿ ಸಲ್ಲಿಸಲಾಯಿತು. ಅಂತಾರಾಷ್ಟ್ರೀಯ ಪ್ರಜಾಪ್ರಭುತ್ವ ದಿನದ ಅಂಗವಾಗಿ ಬೈಕ್ ಜಾಥಾಗೆ ಉತ್ತರಕನ್ನಡ ಜಿಲ್ಲೆಯ ಕಾರವಾರದ ಜಿಲ್ಲಾಧಿಕಾರಿ ಕಚೇರಿ ಆವರಣದಲ್ಲಿ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯಾ ಹಸಿರು ನಿಶಾನೆ ತೋರಿದರು. ತಂಡದ ಜಾಥಾ ಕಾರವಾರ ದಿಂದ ಬೆಂಗಳೂರು ತಲುಪಿ, ಬಾಗಲಕೋಟೆ ಜಿಲ್ಲಾಡಳಿತ ಭವನದಿಂದ ಬೆಂಗಳೂರು ವಿಧಾನಸೌಧದವರೆಗೆ ಹಮ್ಮಿಕೊಂಡ ಬೈಕ್ ರ್ಯಾಲಿಗೆ ಜಿಲ್ಲಾಧಿಕಾರಿ ಸಂಗಪ್ಪ ಇಂದು ಚಾಲನೆ ನೀಡಿದರು.

*><><*><><*

ಉಡುಪಿಯಲ್ಲಿ ಇಂದು ಶ್ರೀ ಕೃಷ್ಣ ಜನ್ಮಾಷ್ಟಮಿ ಪ್ರಯುಕ್ತ ಸೌರಮಾನ ಪದ್ಧತಿಯಂತೆ ಮಹೋತ್ಸವ ನಡೆಯುತ್ತಿದೆ. ಉಡುಪಿ ಕೃಷ್ಣನನ್ನು ಕಾಣಲು ಲಕ್ಷಾಂತರ ಜನ ಉಡುಪಿಗೆ ಬರುತ್ತಿದ್ದಾರೆ ಬಗೆ ಬಗೆಯ ವೇಷಗಳ ಕಲರವ ಅಷ್ಟಮಿಯ ಮೆರುಗು ಹೆಚ್ಚಿಸಿದೆ. ಬೆಳಗ್ಗಿನಿಂದಲೇ ಉಪವಾಸ ಇರುವ ಭಕ್ತರು ಕೃಷ್ಣ ದರ್ಶನ ಮಾಡುತ್ತಿದ್ದಾರೆ. ನಡುರಾತ್ರಿ ೧೨:೧೧ ಕ್ಕೆ ಕೃಷ್ಣ ದೇವರಿಗೆ ಅರ್ಘ್ಯ ಪ್ರಧಾನ ಮಾಡಿದ ಬಳಿಕ ಉಪವಾಸ ತೊರೆಯಲಿದ್ದಾರೆ. ನಾಳೆ ವಿಟ್ಲಪಿಂಡಿ ಆಚರಣೆ ನಡೆಯಲಿದೆ.

*><><*><><*

ಮಂಗಳೂರಿನ ಕದ್ರಿ ಶ್ರೀ ಮಂಜುನಾಥ ಕ್ಷೇತ್ರದ ಆವರಣದಲ್ಲಿ ಇಂದು ನಡೆದ ರಾಷ್ಟ್ರೀಯ ಮಕ್ಕಳ ಉತ್ಸವ ‘ಶ್ರೀಕೃಷ್ಣ ವೇಷ ಸ್ಪರ್ಧೆಯನ್ನು ಉಡುಪಿ ಪೇಜಾವರ ಮಠಾಧೀಶ ಶ್ರೀವಿಶ್ವ ಪ್ರಸನ್ನ ತೀರ್ಥ ಸ್ವಾಮೀಜಿ ಉದ್ಘಾಟಿಸಿದರು.

*><><*><><*

ಇನ್ನು ಹವಾವರ್ತಮಾನ,

ರಾಜ್ಯದ ಉತ್ತರ ಒಳನಾಡಿನಲ್ಲಿ ನೈಋತ್ಯ ಮುಂಗಾರು ಸಾಮಾನ್ಯವಾಗಿತ್ತು. ದಕ್ಷಿಣ ಒಳನಾಡು ಹಾಗೂ ಕರಾವಳಿ ಭಾಗದಲ್ಲಿ ದುರ್ಬಲವಾಗಿತ್ತು. ಪ್ರಮುಖವಾಗಿ ಬೆಳಗಾವಿ ಜಿಲ್ಲೆಯ ಅಥಣಿಯಲ್ಲಿ ೬ ಸೆಂಟಿ ಮೀಟರ್, ಬಾಗಲಕೋಟೆಯ ಮಹಾಲಿಂಗಪುರದಲ್ಲಿ ೪, ಜೊತೆಗೆ ಕೊಪ್ಪಳ, ಬೆಳಗಾವಿ, ಬೀದರ್ ಜಿಲ್ಲೆಯ ಕೆಲವೆಡೆ ತಲಾ ೩ ಸೆಂಟಿ ಮೀಟರ್ ಮಳೆಯಾಗಿದೆ. ನಾಳೆ ಕರಾವಳಿ ಹಾಗೂ ದಕ್ಷಿಣ ಒಳನಾಡಿನ ಜಿಲ್ಲೆಗಳಲ್ಲಿ ಹಗುರದಿಂದ ಸಾಧಾರಣ, ಉತ್ತರ ಒಳನಾಡಿನ ಕೆಲವು ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ. ಮುಂದಿನ ೨೪ ಗಂಟೆಗಳಲ್ಲಿ ಬೆಂಗಳೂರು ಸುತ್ತಮುತ್ತ ಸಾಮಾನ್ಯವಾಗಿ ಮೋಡಕವಿದ ವಾತಾವರಣ. ಹಗುರದಿಂದ ಸಾಧಾರಣ ಮಳೆ ಸಾಧ್ಯತೆ. ಗರಿಷ್ಠ ೨೮, ಕನಿಷ್ಠ ೨೦ ಡಿಗ್ರಿ ಸೆಲ್ಸಿಯಸ್ ತಾಪಮಾನ ಸಂಭವ.

*><><*><><*